517 (572) ಶ್ರೀ ಪಾಟೀಲ್ ಎಸ್.ಎಸ್. (ಮುಂಡರಗಿ) :– ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಮುಂಡರಗಿ ತಾಲ್ಲೂಕು ಡೋಣಿ ಗ್ರಾಮ ಪಂಚಾಯತ್‌ನಲ್ಲಿ ಬರಪರಿಹಾರ ಮತ್ತು ಜಲಸಂರಕ್ಷಣೆ ಯೋಜನೆಗಳಲ್ಲಿ ಬಿಡುಗಡೆಯಾದ ಆಹಾರ ಧಾನ್ಯದಲ್ಲಿ ದುರುಪಯೋಗವಾಗಿ ಹಿಂದಿನ ಅಧಿವೇಶನದಲ್ಲಿ ಉತ್ತರ ನೀಡಿರುವುದು ನಿಜವಲ್ಲವೆ; ಹಾಗಿದ್ದಲ್ಲಿ, ಈ ದುರುಪಯೋಗ ಎಸಗಿದವರ ಮೇಲೆ ಕೈಗೊಳ್ಳಲಾದ ಕ್ರಮವೇನು;

ಆ) ಈ ಪ್ರಕರಣದಲ್ಲಿ ಸಮಿತಿಯವರು ಭಾಗಿಯಾಗಿದ್ದಾರೆಯೇ;

ಇ) ಈ ಪ್ರಕರಣದಲ್ಲಿ ತನಿಖಾ ವರದಿ ಬಂದಿದೆಯೇ, ಬಂದಿದ್ದರೆ ಯಾವ ಕ್ರಮ ಕೈಗೊಳ್ಳಲಾಗಿದೆ, ಕ್ರಮ ಕೈಗೊಳ್ಳದಿದ್ದರೆ ಯಾವಾಗ ಕ್ರಮ ಕೈಗೊಳ್ಳಲಾಗುವುದು?

ಶ್ರೀ ಸಿ.ಎಂ. ಉದಾಸಿ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು):

ಅ) ಮುಂಡರಗಿ ತಾಲ್ಲೂಕು ಡೋಣಿ ಗ್ರಾಮ ಪಂಚಾಯತ್‌ನಲ್ಲಿ ಬರ ಪರಿಹಾರ ಮತ್ತು ಜಲರಕ್ಷಣೆ ಯೋಜನೆಗಳಲ್ಲಿ ಬಿಡುಗಡೆಯಾದ ಆಹಾರ ಧಾನ್ಯಗಳು ದುರುಪಯೋಗವಾಗಿರುವುದು ಸರಕಾರದ ಗಮನಕ್ಕೆ ಬಂದಿದೆ. ಈ ಸಂಬಂಧ ಸದರಿ ಗ್ರಾಮ ಪಂಚಾಯತ್ ಕಾರ್ಯದರ್ಶಿಯನ್ನು ಅಮಾನತ್ತು ಗೊಳಿಸಲಾಗಿದೆ.

ಆ) ಸಮಿತಿಯವರು ಭಾಗಿಯಾಗಿರುವುದಿಲ್ಲವೆಂದು ಜಿಲ್ಲಾ ಪಂಚಾಯತಿಯಿಂದ ವರದಿ ಬಂದಿದೆ.

ಇ) ತನಿಖಾ ವರದಿಯು ಜಿಲ್ಲಾ ಜಲಾನಯನ ಅಧಿಕಾರಿಗಳಿಂದ ಬಂದಿದೆ. ಸದರಿ ವಿಷಯವು ಇಲಾಖಾ ತನಿಖೆ ಪ್ರಗತಿಯಲ್ಲಿರುತ್ತದೆ. ಇಲಾಖಾ ವಿಚಾರಣೆ ಮುಗಿದ ನಂತರ, ತಕ್ಷಣವೇ ಸದರಿಯವರ ವಿರುದ್ಧ ಕ್ರಮ ಜರುಗಿಸಲಾಗುವುದು.

518 (573) ಶ್ರೀ ಎಸ್.ಎಸ್. ಪಾಟೀಲ್ (ಮುಂಡರಗಿ) :– ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಶ್ರೀ ಶರಣಬಸವೇಶ್ವರ ವಿದ್ಯಾಪೀಠ (ರಿ). ಸಾ:ಕಲಕೇರಿ, ತಾ: ಮುಂಡರಗಿ ಇದು ಪ.ಜಾತಿ ಆಡಳಿತ ಮಂಡಳಿ ಹೊಂದಿದ್ದು ಈ ಸಂಸ್ಥೆಯ ವತಿಯಿಂದ ಗದಗ್ ಜಿಲ್ಲೆ ನರಗುಂದ ಪಟ್ಟಣದಲ್ಲಿ ಹಾಗೂ ಹಾವೇರಿ ಜಿಲ್ಲೆ ಹಾವೇರಿ ಪಟ್ಟಣದಲ್ಲಿ ನಡೆಯತಕ್ಕಂತಹ ಪ್ರೌಢಶಾಲೆಗಳನ್ನು ಅನುದಾನಕ್ಕೆ ಒಳಪಡಿಸಲು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುವುದು ನಿಜವೇ;

ಆ) ಹಾಗಿದ್ದಲ್ಲಿ, ಅನುದಾನಕ್ಕೆ ಒಳಪಡಿಸಿ ಆದೇಶವನ್ನು ಯಾವಾಗ ಹೊರಡಿಸಲಾಗುವುದು?

ಶ್ರೀ ಬಿ.ಎಸ್. ಹೊರಟ್ಟಿ(ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು):

ಅ) ಮತ್ತು ಆ) ಶ್ರೀ ಶರಣಬಸವೇಶ್ವರ ವಿದ್ಯಾಪೀಠ (ರಿ), ಕಲಕೇರಿ, ತಾ: ಮುಂಡರಗಿ ಈ ವಿದ್ಯಾಸಂಸ್ಥೆಯಿಂದ ಈ ಕೆಳಕಂಡ ಪ್ರೌಢಶಾಲೆಗಳನ್ನು ನಡೆಸಲಾಗುತ್ತಿದೆ:–

1) ಶ್ರೀ ಭಕ್ತಿಭಂಡಾರಿ ಪ್ರೌಢಶಾಲೆ, ಹಾವೇರಿ.

2) ಅಲ್ಲಮ ಪ್ರಭುದೇವರ ಪ್ರೌಢಶಾಲೆ, ನರಗುಂದ, ಗದಗ್.

ಸದರಿ ಶಾಲೆಗಳನ್ನು ಸಹಾಯಾನುದಾನಕ್ಕೆ ಒಳಪಡಿಸಲು ಸರ್ಕಾರಕ್ಕೆ ಪ್ರಸ್ತಾವನೆ ಬಂದಿರುತ್ತದೆ.

ದಿನಾಂಕ: 13.09.02ರ ಸರ್ಕಾರಿ ಆದೇಶ ಸಂಖ್ಯೆ: ಇಡಿ 65 ವಿವಿಧ 97ರ ಪ್ರಕಾರ ದಿನಾಂಕ: 01.06.87ರಿಂದ ದಿನಾಂಕ: 31.03.92ರ ಅವಧಿಯಲ್ಲಿ ಪ.ಜಾತಿ ಮತ್ತು ಪ.ಪಂಗಡದ ಆಡಳಿತ ಮಂಡಳಿಗಳ ವತಿಯಿಂದ ಪ್ರಾರಂಭಿಸಿ ಸತತವಾಗಿ ನಡೆಸಲಾಗುತ್ತಿರುವ ಖಾಸಗಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳನ್ನು ಅದರನ್ವಯ ವಿಧಿಸಲಾದ ಷರತ್ತುಗಳಿಗೆ ಒಳಪಟ್ಟು, ಸಹಾಯಾನುದಾನಕ್ಕೆ ಒಳಪಡಿಸಲು ಆಸ್ಪದ ಕಲ್ಪಿಸಲಾಗಿದೆ. ಸದರಿ ಆದೇಶದ ಕಂಡಿಕೆ: 3(1)ರ ಪ್ರಕಾರ ಈ ಕೆಳಕಂಡಂತೆ ಷರತ್ತನ್ನು ವಿಧಿಸಿದೆ:–

ಪ.ಜಾತಿ ಮತ್ತು ಪ.ಪಂಗಡದ ಶಿಕ್ಷಣ ಸಂಸ್ಥೆಗಳ ವತಿಯಿಂದ ನಡೆಸುತ್ತಿರುವ ಪ್ರಾಥಮಿಕ / ಪ್ರೌಢಶಾಲೆಗಳು ಸಕ್ಷಮ ಪ್ರಾಧಿಕಾರದಿಂದ ಅನುಮತಿ ಪಡೆದು, ದಿನಾಂಕ: 01.06.87ರಿಂದ ದಿನಾಂಕ: 31.03.92ರ ಅವಧಿಯಲ್ಲಿ ಪ್ರಾರಂಭವಾಗಿರಬೇಕು.

ಖಾಸಗಿ ಪ್ರೌಢಶಾಲೆಗಳನ್ನು ಪ್ರಾರಂಭಿಸಲು ಅನುಮತಿ ನೀಡುವ ಸಕ್ಷಮ ಪ್ರಾಧಿಕಾರ ಸರ್ಕಾರವಾಗಿರುತ್ತದೆ. ಮೇಲೆ ಉಲ್ಲೇಖಿಸಿದ ಎರಡು ಪ್ರೌಢಶಾಲೆಗಳನ್ನು ಪ್ರಾರಂಭಿಸಲು ಸಂಬಂಧಿಸಿದ ಸಂಸ್ಥೆ ಜಿಲ್ಲಾ ಪಂಚಾಯತ್‌ನಿಂದ ಅನುಮತಿ ಪಡೆದಿದೆ. ಇದಕ್ಕೆ ಸಕ್ಷಮ ಪ್ರಾಧಿಕಾರವಾದ ಸರ್ಕಾರದ ಅನುಮತಿ ಪಡೆದಿರುವುದಿಲ್ಲ. ಈ ರೀತಿಯ ಶಾಲೆಗಳನ್ನು ಅನುದಾನಕ್ಕೆ ಒಳಪಡಿಸುವ ವಿಷಯ ಸರ್ಕಾರದ ಪರಿಶೀಲನೆಯಲ್ಲಿದೆ.

519(879) ಶ್ರೀ ಪ್ರಭಾಕರ ಬಂಗೇರ ಕೆ. (ಬೆಳ್ತಂಗಡಿ) :– ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ?

ಅ) ಬೆಳ್ತಂಗಡಿ ತಾಲ್ಲೂಕು ವ್ಯಾಪ್ತಿಗೆ ಬರುವ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ವರ್ಗದವರ ಸಂಖ್ಯೆ ಎಷ್ಟು;

ಆ) ಈ ಹುದ್ದೆಗಳನ್ನು ಸಕಾಲದಲ್ಲಿ ಭರ್ತಿ ಮಾಡಿ ಶೈಕ್ಷಣಿಕ ಚಟುವಟಿಕೆಗಳಿಗೆ ಅನುಕೂಲ ಮಾಡಿಕೊಡಲು ಸರ್ಕಾರ ಕ್ರಮ ಜರುಗಿಸುವುದೇ;